# ಸಿಎಂ ವಿರುದ್ಧ ದೂರು ನೀಡಿಲ್ಲ

ಉದ 8/4/21

**ಬೆಂಗಳೂರು:** ನಾನು ಮುಖ್ಯಮಂತ್ರಿ ಯಡಿಯೂರಪ್ಪ ಅವರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲು ಹೋಗಿರಲಿಲ್ಲ, ಇಲಾಖೆಯ ಬಗ್ಗೆ ಇರುವ ಗೊಂದಲದ ಬಗ್ಗೆ ಮಾಹಿತಿ ಪಡೆಯಲು ಹೋಗಿದ್ದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ಸಿಎಂ ವಿರುದ್ಧದ ಬಂಡಾಯಕ್ಕೆ ತೇಪೆ ಹಚ್ಚುವ ಪ್ರಯತ್ನ ಮಾಡಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯಪಾಲರು ಗುಜರಾತ್‌ನಲ್ಲಿ ಹಣಕಾಸು ಸಚಿವರಾಗಿದ್ದವರು. ಹೀಗಾಗಿ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಅನುದಾನ ಬಿಡುಗಡೆ ಬಗ್ಗೆ ಇರುವ ಗೊಂದಲದ ಬಗ್ಗೆ ಸ್ಪಷ್ಟೀಕರಣಕ್ಕಾಗಿ ಅವರ ಬಳಿ ಹೋಗಿದ್ದೆ ಹೊರತು ಯಡಿಯೂರಪ್ಪ ವಿರುದ್ಧ ದೂರು ಕೊಟ್ಟಿಲ್ಲ ಎಂದರು.

**ಬಂಡಾಯಕ್ಕೆ ತೇಪೆ ಹಚ್ಚಿದ ಈಶ್ವರಪ್ಪ: ಬಿಎಸ್‌ವೈ ಬಗ್ಗೆ ಮೃದು ಧೋರಣೆ**

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿರುವ ಸಿ.ಟಿ ರವಿ, ಪಕ್ಷದ ನಾಯಕರು. ಹೀಗಾಗಿ ಇಲಾಖೆಯ ವಿಚಾರವನ್ನು ಅವರ ಗಮನಕ್ಕೆ ತಂದಿದ್ದೆ. ಪಕ್ಷದ ನಾಯಕರ ಗಮನಕ್ಕೆ ತರದೇ ಹೆಚ್.ಡಿ.ದೇವೇಗೌಡ ಹಾಗೂ ಡಿ.ಕೆ. ಶಿವಕುಮಾರ್ ಅವರಿಗೆ ದೂರು ಕೊಡಲು ಆಗುತ್ತದೆಯೇ ಎಂದು ಪ್ರಶ್ನಿಸಿದರು. ಬೇರೆ ಇಲಾಖೆಯಲ್ಲಿ ನೇರವಾಗಿ ಸಿಎಂ ಹಸ್ತಕ್ಷೇಪ ಮಾಡಲು ಬರುವುದಿಲ್ಲ, ಆದರೆ, ಹಣ ಬಿಡುಗಡೆ ಮಾಡಬಹುದು ಎಂದು ಮತ್ತೆ ಸೂಚ್ಯವಾಗಿ ಹೇಳಿದ ಈಶ್ವರಪ್ಪ ಈ ಬಗ್ಗೆ ಹೆಚ್ಚು ಚರ್ಚೆಯ ಅವಶ್ಯಕತೆ ಬೇಡ ಎಂದು ಹೇಳಿದರು.

**ಸಿದ್ದರಾಮಯ್ಯಗೆ ನೊಬೆಲ್ ನೀಡಬೇಕು:** ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿ, ಸಿಎಂ ಯಡಿಯೂರಪ್ಪ ಬದಲಾಗುತ್ತಾರೆ ಎಂದು ಸಿದ್ದರಾಮಯ್ಯ ಕಟ್ಟು ಕಥೆ ಕಟ್ಟುವುದರಲ್ಲಿ ನಿಸ್ಸೀಮರು. ಅವರಿಗೆ ಜ್ಞಾನಪೀಠ ಪ್ರಶಸ್ತಿ ಅಥವಾ ನೊಬೆಲ್ ಪ್ರಶಸ್ತಿ ಕೊಡಬೇಕು ಎಂದರು.

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೆ ಬುದ್ಧಿ ಹೇಳಿದ ಈಶ್ವರಪ್ಪ ಯತ್ನಾಳ್ ಏನೇ ಇದ್ದರೂ ಪಕ್ಷದ ಚೌಕಟ್ಟಿನೊಳಗೆ ಮಾತನಾಡಬೇಕು. ಯಾರದ್ದೇ ವಿರುದ್ಧ ಆರೋಪ ಮಾಡುವಾಗಲೂ ಅದಕ್ಕೆ ಸೂಕ್ತ ದಾಖಲೆ ಕೊಟ್ಟು ಮಾತನಾಡಬೇಕು. ಸುಮ್ಮನೆ ಗಾಳಿಯಲ್ಲಿ ಗುಂಡು ಹಾರಿಸಿದಂತೆ ಬಾಯಿಗೆ ಬಂದಂತೆ ಮಾತನಾಡುವುದು ಸರಿಯಲ್ಲ. ಈಗಲೂ ಯಡಿಯೂರಪ್ಪರೇ ನಮ್ಮ ನಾಯಕರು ಎಂದರು.